ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ
"ಸಾರಿಗೆ ಭವನ" ಕೇಂದ್ರ ಕಛೇರಿ,
ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು-560 027. ಭಾರತ
ದೂರವಾಣಿ : 080-22221321 / 22221325
ವೆಬ್-ಸೈಟ್ : www.ksrtc.karnataka.gov.in

Karnataka State Road Transport Corporation
"Transport House" Central Offices,
K.H.Road, Shanthinagar, Bangalore-560 027. India
Tel : 080-22221321 / 25
Website : www.ksrtc.karnataka.gov.in

**ಸಂಖ್ಯೆ: ಕರಾಸಾ/ಕೇಕ/ಆಡಳತ/ಎ1-03/ 874 /2021-22** **ದಿನಾಂಕ:31/01/2022**

**: ಆ ದೇ ಶ :**

**ವಿಷಯ:** ಕೋವಿಡ್-19 ಸಾಂಕ್ರಾಮಿಕ ರೋಗಕ್ಕೆ ಒಳಪಟ್ಟ ನಿಗಮದ ಅಧಿಕಾರಿ/ನೌಕರರಿಗೆ ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡುವ ಕುರಿತು.

**ಉಲ್ಲೇಖ:** 1. ಸಂಖ್ಯೆ:ಕರಾಸಾ/ಕೇಕ/ಆಡಳತ/ಎ1-03/224/2020-21 ದಿ:07.08.2020.
2. ಸಂಖ್ಯೆ:ಕರಾಸಾ/ಕೇಕ/ಆಡಳತ/ಎ1-03/324/2020-21 ದಿ:12.09.2020.
3. ಅಧಿಕೃತ ಜ್ಞಾಪನ ಸಂಖ್ಯೆ: ಆಇ 02 ಸೇನಿಸೇ 2022 ದಿನಾಂಕ: 27.01.2022.

+++++

ಕೋವಿಡ್-19 ಸಾಂಕ್ರಾಮಿಕ ರೋಗಕ್ಕೆ ಒಳಪಟ್ಟ ನಿಗಮದ ಅಧಿಕಾರಿ/ನೌಕರರಿಗೆ ವಿಶೇಷ ಸಾಂದರ್ಭಿಕ ರಜೆಯನ್ನು ನೀಡುವ ಕುರಿತು ಉಲ್ಲೇಖ: 1 & 2 ರಲ್ಲಿ ನಿರ್ದೇಶನಗಳನ್ನು ನೀಡಲಾಗಿದೆ. ಪ್ರಸ್ತುತ, ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಆಇ 02 ಸೇನಿಸೇ 2022 ದಿನಾಂಕ: 27.01.2022 ರಲ್ಲಿ ಕೋವಿಡ್-19 ರೋಗದಿಂದ ಸೋಂಕಿತ ರಾಜ್ಯ ಸರ್ಕಾರಿ ನೌಕರರಿಗೆ ಸಂದರ್ಭಾನುಸಾರ ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಲು ನಿರ್ದೇಶನ ನೀಡಿರುತ್ತದೆ. ಅದರಂತೆ, ನಿಗಮದ ಅಧಿಕಾರಿ/ನೌಕರರಿಗೆ ಕೋವಿಡ್-19 ಸಂಬಂಧ 'ವಿಶೇಷ ಸಾಂದರ್ಭಿಕ' ರಜೆಯನ್ನು ಮಂಜೂರು ಮಾಡಲು ಈ ಕೆಳಕಂಡಂತೆ ಆದೇಶಿಸಲಾಗಿದೆ.

1) ನಿಗಮದ ಅಧಿಕಾರಿ/ನೌಕರ ಅಥವಾ ಆತನ ಕುಟುಂಬದ ಸದಸ್ಯರು ಕೋವಿಡ್-19 ಸಾಂಕ್ರಾಮಿಕ ರೋಗಕ್ಕೆ ಒಳಪಟ್ಟ ಸಂದರ್ಭದಲ್ಲಿ ಹಾಗೂ ನಿಗಮದ ಅಧಿಕಾರಿ/ ನೌಕರನು ವಾಸಿಸುವ ಪ್ರದೇಶವನ್ನು ಕಂಟೇನ್ಮೆಂಟ್ ಪ್ರದೇಶವೆಂದು ಘೋಷಿಸಿ ಸಾರ್ವಜನಿಕ ಸಂಚಾರದಲ್ಲಿ ಯಾವುದೇ ನಿರ್ಬಂಧ ವಿಧಿಸಿದ್ದಲ್ಲಿ ಅಂತಹ ನಿಗಮದ ಅಧಿಕಾರಿ/ನೌಕರರಿಗೆ ಗರಿಷ್ಠ 07 ದಿನಗಳ (ಏಳು ದಿನಗಳು) ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಬಹುದು.
2) ಸದರಿ ರಜೆಯ ಮೇಲಿರುವ ನಿಗಮದ ಅಧಿಕಾರಿ/ನೌಕರನು ಕಚೇರಿಯ ತುರ್ತು ಕೆಲಸಗಳ ನಿರ್ವಹಣೆಗೆ ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರವು ದೂರವಾಣಿ, ಆನ್‌ಲೈನ್ ಮೂಲಕ ನೀಡುವ ಸೂಚನೆಗಳನ್ನು ಪಾಲಿಸುವುದಕ್ಕೆ ಬದ್ಧನಾಗಿರತಕ್ಕದ್ದು.
3) ಈ ಸೂಚನೆಗಳು ತಕ್ಷಣದಿಂದ ಅನ್ವಯಿಸಿ ಮುಂದಿನ ಆದೇಶದವರೆವಿಗೂ ಜಾರಿಯಲ್ಲಿರುತ್ತವೆ.

ಸಂಬಂಧಪಟ್ಟವರೆಲ್ಲರೂ ಮೇಲಿನ ನಿರ್ದೇಶನಗಳನ್ನು ತಪ್ಪದೇ ಪಾಲಿಸಲು ಸೂಚಿಸಲಾಗಿದೆ.

**(ಶಿವಯೋಗಿ ಸಿ.ಕಳಸದ, ಭಾ.ಆ.ಸೇ.,)**
**ವ್ಯವಸ್ಥಾಪಕ ನಿರ್ದೇಶಕರು**

..02

KSRTC.COVID-19 A1

Scanned with CamScanner

<u>ಪ್ರತಿ ಮಾಹಿತಿಗಾಗಿ:</u>

1. ಮಾನ್ಯ ಅಧ್ಯಕ್ಷರು/ಉಪಾಧ್ಯಕ್ಷರು, ಕ.ರಾ.ರ.ಸಾ.ನಿಗಮ ರವರ ಆಪ್ತ ಕಾರ್ಯದರ್ಶಿಯವರಿಗೆ.
2. ವ್ಯವಸ್ಥಾಪಕ ನಿರ್ದೇಶಕರು, ಬೆಂ.ಮ.ಸಾ.ಸಂಸ್ಥೆ/ವಾ.ಕ.ರ.ಸಾ.ಸಂಸ್ಥೆ/ಕ.ಕ.ರ.ಸಾ.ನಿಗಮ ರವರಿಗೆ.
3. ನಿರ್ದೇಶಕರು(ಸಿ:ಪ)/ನಿರ್ದೇಶಕರು(ಭ:ಜಾ), ಕ.ರಾ.ರ.ಸಾ.ನಿಗಮ ರವರಿಗೆ.

<u>ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:</u>

4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು / ಹಿರಿಯ/ವಿಭಾಗೀಯ ನಿಯಂತ್ರಣಾಧಿಕಾರಿಗಳು / ಕಾರ್ಯ ವ್ಯವಸ್ಥಾಪಕರು / ಪ್ರಾಂಶುಪಾಲರು ಕ.ರಾ.ರ.ಸಾ.ನಿಗಮ ರವರುಗಳಿಗೆ.
5. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂ.ಮ.ಸಾ.ಸಂಸ್ಥೆ/ವಾ.ಕ.ರ.ಸಾ.ಸಂಸ್ಥೆ/ಕ.ಕ.ರ.ಸಾ.ನಿಗಮ ರವರಿಗೆ.
6. ಮುಖ್ಯ ಭದ್ರತಾ ಮತ್ತು ಜಾಗೃತಾಧಿಕಾರಿ, ಕ.ರಾ.ರ.ಸಾ.ನಿಗಮ, ಕೇಂದ್ರ ಕಚೇರಿ, ಬೆಂಗಳೂರು ರವರಿಗೆ, ಆದೇಶವನ್ನು ಕೇಂದ್ರ ಕಚೇರಿಯ ಸೂಚನಾ ಫಲಕದಲ್ಲಿ ಪ್ರದರ್ಶಿಸಿ, ಪ್ರದರ್ಶಿತಗೊಂಡ ಬಗ್ಗೆ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು ರವರಿಗೆ ವರದಿ ಸಲ್ಲಿಸುವುದು.
7. ಮುಖ್ಯ ಗಣಕ ವ್ಯವಸ್ಥಾಪಕರು, ಕ.ರಾ.ರ.ಸಾ.ನಿಗಮ, ಕೇಂದ್ರ ಕಚೇರಿ, ಬೆಂಗಳೂರು ರವರಿಗೆ, ಸದರಿ ಆದೇಶವನ್ನು ನಿಗಮದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು. ಪ್ರಕಟಿಸಿದ ಬಗ್ಗೆ ಮಾಹಿತಿ ನೀಡುವುದು.
8. ಉಪ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಕ.ರಾ.ರ.ಸಾ.ನಿಗಮ, ಕೇಂದ್ರ ಕಚೇರಿ, ಬೆಂಗಳೂರು ರವರಿಗೆ
9. ಮುದ್ರಣ ಮತ್ತು ಲೇಖನ ಸಾಮಗ್ರಿ ನಿಯಂತ್ರಣಾಧಿಕಾರಿ, ಕ.ರಾ.ರ.ಸಾ.ನಿಗಮ, ಕ.ರಾ.ಸಾ. ಮುದ್ರಣಾಲಯ, ಬೆಂಗಳೂರು ರವರಿಗೆ.
10. ಮುಖ್ಯ ವೈದ್ಯಾಧಿಕಾರಿ, ಕ.ರಾ.ರ.ಸಾ.ನಿಗಮ, ಕ.ರಾ.ಸಾ.ಆಸ್ಪತ್ರೆ, ಬೆಂಗಳೂರು ರವರಿಗೆ.
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.



Scanned with CamScanner

**ಕರ್ನಾಟಕ ಸರ್ಕಾರ**

ಸಂಖ್ಯೆ: ಆಇ 02 ಸೇನಿಸೇ 2022

ಕರ್ನಾಟಕ ಸರ್ಕಾರ ಸಚಿವಾಲಯ
ವಿಧಾನ ಸೌಧ,
ಬೆಂಗಳೂರು, ದಿನಾಂಕ: 27/01/2022

## ಅಧಿಕೃತ ಜ್ಞಾಪನ

ವಿಷಯ: ಕೋವಿಡ್-19 ಸಾಂಕ್ರಾಮಿಕ ರೋಗಕ್ಕೆ ಒಳಪಟ್ಟ ರಾಜ್ಯ ಸರ್ಕಾರಿ ನೌಕರರಿಗೆ ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡುವ ಬಗ್ಗೆ.

ಉಲ್ಲೇಖ:
1. ದಿನಾಂಕ: 22/07/2020 ರ ಸಂಖ್ಯೆ: ಎಫ್‌ಡಿ 04(ಇ) ಎಸ್‌ಆರ್‌ಎಸ್ 2020 ರ ಸರ್ಕಾರಿ ಆದೇಶ.
2. ದಿನಾಂಕ: 29/08/2020 ರ ಸಂಖ್ಯೆ: ಆಇ 04(ಇ) ಸೇನಿಸೇ 2020 ರ ಸರ್ಕಾರದ ಅಧಿಕೃತ ಜ್ಞಾಪನ.
3. ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ ಅಧ್ಯಕ್ಷರು, ರಾಜ್ಯ ನಿರ್ವಹಣೆ ಸಮಿತಿ ಇವರ ದಿನಾಂಕ: 21/01/2022 ರ ಆದೇಶ ಸಂಖ್ಯೆ: ಆರ್‌ಡಿ 158 ಟಿಎನ್‌ಆರ್ 2020.

*******

ಕೋವಿಡ್-19 ಸಾಂಕ್ರಾಮಿಕ ರೋಗದಿಂದ ಸೋಂಕಿತ ರಾಜ್ಯ ಸರ್ಕಾರಿ ನೌಕರರಿಗೆ ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡುವ ಕುರಿತು ಉಲ್ಲೇಖ (1) ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಯ ಅನೆಕ್ಷರ್-"ಬಿ" ರಲ್ಲಿನ ನಿಯಮ 4ಕ್ಕೆ ಸೇರ್ಪಡೆಗೊಳಿಸಲಾಗಿರುತ್ತದೆ ಹಾಗೂ ಈ ಸಂಬಂಧ ಉಲ್ಲೇಖ (2) ರ ಅಧಿಕೃತ ಜ್ಞಾಪನದಲ್ಲಿ ಸ್ಪಷ್ಟೀಕರಿಸಲಾಗಿರುತ್ತದೆ.

ರಾಜ್ಯದಲ್ಲಿ ಕೋವಿಡ್-19 ರೋಗದ ಪ್ರತಿರೋಧಕ ಲಸಿಕೆ ಚುಚ್ಚುಮದ್ದು ನೀಡಲಾಗಿರುವ ಹಿನ್ನೆಲೆಯಲ್ಲಿ ಈ ರೋಗದ ತೀವ್ರತೆಯು ಪ್ರಸ್ತುತ ಇಳಿಮುಖವಾಗಿದ್ದು, ಇದಕ್ಕೆ ತುತ್ತಾದವರು ಚಿಕಿತ್ಸೆ ಪಡೆದು ಗುಣಮುಖರಾಗುತ್ತಿರುವ ಪ್ರಮಾಣದಲ್ಲಿಯೂ ಗಣನೀಯವಾದ ಬದಲಾವಣೆ ಆಗಿರುವುದನ್ನು ಪರಿಗಣಿಸಿ ಉಲ್ಲೇಖ (3) ರಂತೆ ಕೋವಿಡ್-19 ಸಂಬಂಧ ಮುಂಜಾಗ್ರತಾ ಕ್ರಮದ ಮಾರ್ಗಸೂಚಿಯನ್ನು ಮಾರ್ಪಡಿಸಿ ಆದೇಶಿಸಿರುವುದನ್ನು ಗಮನದಲ್ಲಿಟ್ಟುಕೊಂಡು, ಕೋವಿಡ್-19 ರೋಗದಿಂದ ಸೋಂಕಿತ ರಾಜ್ಯ ಸರ್ಕಾರಿ ನೌಕರರಿಗೆ ಸಂದರ್ಭಾನುಸಾರ ವಿಶೇಷ ಸಾಂದರ್ಭಿಕ ರಜೆಯನ್ನು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರವು ಈ ಕೆಳಕಂಡಂತೆ ಮಂಜೂರು ಮಾಡಬಹುದಾಗಿದೆ:

1. ಸರ್ಕಾರಿ ನೌಕರ ಅಥವಾ ಆತನ ಕುಟುಂಬದ ಸದಸ್ಯರು ಕೋವಿಡ್-19 ಸಾಂಕ್ರಾಮಿಕ ರೋಗಕ್ಕೆ ಒಳಪಟ್ಟ ಸಂದರ್ಭದಲ್ಲಿ ಹಾಗೂ ಸರ್ಕಾರಿ ನೌಕರನು ವಾಸಿಸುವ ಪ್ರದೇಶವನ್ನು ಕಂಟೇನ್ಮೆಂಟ್ ಪ್ರದೇಶವೆಂದು ಘೋಷಿಸಿ ಸಾರ್ವಜನಿಕ ಸಂಚಾರದಲ್ಲಿ ಯಾವುದೇ ನಿರ್ಬಂಧ ವಿಧಿಸಿದ್ದಲ್ಲಿ ಅಂತಹ ಸರ್ಕಾರಿ ನೌಕರನಿಗೆ ಗರಿಷ್ಠ 7 ದಿನಗಳ (ಏಳು ದಿನಗಳು) ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಬಹುದು.

2. ಸದರಿ ರಜೆಯ ಮೇಲಿರುವ ಸರ್ಕಾರಿ ನೌಕರನು ಕಚೇರಿಯ ತುರ್ತು ಕೆಲಸಗಳ ನಿರ್ವಹಣೆಗೆ ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರವು ದೂರವಾಣಿ, ಆನ್‌ಲೈನ್ ಮೂಲಕ ನೀಡುವ ಸೂಚನೆಗಳನ್ನು ಪಾಲಿಸುವುದಕ್ಕೆ ಬದ್ಧನಾಗಿರತಕ್ಕದ್ದು.

2....

Scanned with CamScanner

3. ಈ ಸೂಚನೆಗಳು ತಕ್ಷಣದಿಂದ ಅನ್ವಯಿಸಿ ಮುಂದಿನ ಆದೇಶದವರೆಗೆ ಜಾರಿಯಲ್ಲಿರುತ್ತವೆ.

27.1.22
(ಅಜಯ್ ಎಸ್. ಕೊರಡೆ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-1).

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಇವರಿಗೆ-ಮುಂದಿನ ಕರ್ನಾಟಕ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು.

ಪ್ರತಿ ಇವರಿಗೆ:

1. ಪ್ರಧಾನ ಮಹಾಲೇಖಪಾಲರು (G & SSA), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001.
2. ಮಹಾಲೇಖಪಾಲರು (E & RSA), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001.
3. ಮಹಾಲೇಖಪಾಲರು (A & E), ಕರ್ನಾಟಕ ಪೋಸ್ಟ್ ಬಾಕ್ಸ್ ಸಂಖ್ಯೆ-5329/5369, ಪಾರ್ಕ್‌ಹೌಸ್ ರೋಡ್, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
7. ಎಲ್ಲಾ ಜಿಲ್ಲಾಧಿಕಾರಿಗಳು.
8. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.
9. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
10. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
15. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
16. ಯೋಜನಾ ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
17. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145 "A" ಬಹುಮಹಡಿಗಳ ಕಟ್ಟಡ, ಬೆಂಗಳೂರು.
18. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
19. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
20. ಕರ್ನಾಟಕ ಸರ್ಕಾರಿ ಸಚಿವಾಲಯದ ಎಲ್ಲಾ ಶಾಖೆಗಳು.
21. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
22. ವಾರಪತ್ರ/ಶಾಖೆಯ ರಕ್ಷಾ ಕಡತ.

ಕ್ರಮ ಸಂಖ್ಯೆ:1 ರಿಂದ 18 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ।
ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ www.finance.karnataka.gov.in ವೀಕ್ಷಿಸಿ.

Scanned with CamScanner